ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
20ನೇ ಮಹಡಿ, ವಿ.ವಿ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು
560001

ಕರ್ನಾಟಕ ಸರ್ಕಾರ

ದೂರವಾಣಿ:080- 22864212.
ಫ್ಯಾಕ್ಸ್: 080-22863618
Email:directorgokdom@gmail.com
Web: www.gokdom.kar.nic.in

ಸಂಖ್ಯೆ:-ಅಸಂನಿ/ಆ/ಜಿಕಪತ್ರ/ಸಿಆರ್-30/2019-20

ದಿನಾಂಕ:07.01.2020

**ಸುತ್ತೋಲೆ**

ವಿಷಯ: ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರವಾಸ ಕೈಗೊಳ್ಳಲು ಅನುಮತಿ ನೀಡುವ ಬಗ್ಗೆ.

******

ಶೈಕ್ಷಣಿಕ ಪ್ರವಾಸ ಎಂಬುದು ಶಾಲಾ ಮಕ್ಕಳ ಅಥವಾ ಕಾಲೇಜು ವಿದ್ಯಾರ್ಥಿಗಳ ಕಲಿಕೆಯ ಒಂದು ಭಾಗವೆಂದೇ ಹೇಳಬಹುದು. ತಮ್ಮ ಸ್ವಂತ ಅನುಭವದ ಮೇಲೆ, ವೀಕ್ಷಣೆಯ ಮೇರೆಗೆ ಮಕ್ಕಳಿಗೆ ಕಲಿಯುವ ಒಂದು ಅವಕಾಶ. ಶೈಕ್ಷಣಿಕ ಪ್ರವಾಸದ ಯೋಜನೆಯಿಂದ ಮಕ್ಕಳಲ್ಲಿ ಇತಿಹಾಸ, ವಾಸ್ತುಶಿಲ್ಪ, ಅಭಿವೃದ್ಧಿ, ಉದ್ಯಮ, ಜನ, ಧರ್ಮ, ಸಂಸ್ಕೃತಿ, ಹಾಡು, ನೃತ್ಯ, ಹವಾಮಾನ, ನಿಸರ್ಗ, ಪ್ರಾಣಿ, ಪಕ್ಷಿ ಸಂಕುಲ, ಮತ್ತು ಪರಿಸರದ ಕುರಿತಾಗಿ ಸಾಕಷ್ಟು ವಿಷಯಗಳು ಅರಿವಿಗೆ ಬರುತ್ತವೆ. ಕಲ್ಪನೆಗೂ ಮೀರಿ ಅವರ ಜ್ಞಾನಶಕ್ತಿ ವಿಸ್ತಾರಗೊಳ್ಳುತ್ತದೆ. ಮಕ್ಕಳಲ್ಲಿ ಒಳ್ಳೆಯ ವ್ಯಕ್ತಿತ್ವವನ್ನು ಹುರುದುಂಬಿಸಲು ಅನುಕೂಲವಾಗುತ್ತದೆ. ಕೇವಲ ಪಾಠದ ವಿಷಯಕ್ಕಾಗಿ ಅಲ್ಲದೇ, ಈ ರೀತಿಯ ಪ್ರವಾಸಗಳು ಮಕ್ಕಳಲ್ಲಿ ಸಹಬಾಳ್ವೆ, ಏಕತಾನತೆ, ಪರಸ್ಪರ ಸಹಕಾರ, ಸಂತೋಷ ಹಂಚುವ ಭಾವನೆ, ತಮ್ಮ ವಯಸ್ಸಿಗೆ ತಕ್ಕ ಜವಾಬ್ದಾರಿ ನಿರ್ವಹಣೆ, ಇತರೆ ವ್ಯಕ್ತಿಯೊಡನೆ ಗೌರವ ಹೀಗೆ ಇನ್ನೂ ಹಲವು ಬಗೆಯ ಸೌಜನ್ಯ ನಡವಳಿಕೆಗಳನ್ನು ತುಂಬಲು ಮತ್ತು ಮಕ್ಕಳು ಮುಂದೆ ಸಂಭಾವಿತರಾಗಿ ಬೆಳೆಯಲು ಪ್ರೋತ್ಸಾಹ ನೀಡಿದಂತಾಗುತ್ತದೆ. ಪಠ್ಯ ಪುಸ್ತಕಗಳಲ್ಲಿ ಕೇಳಿ, ಓದಿ ತಿಳಿಯುವುದಕ್ಕಿಂತಲೂ, ವಾಸ್ತವಿಕವಾಗಿ ನೋಡಿ ಅದರ ಅನುಭವ ಪಡೆಯುವುದು, ಆ ವಸ್ತು ವಿಷಯಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಮೌಲ್ಯವನ್ನು ಕೊಡುತ್ತದೆ. ಇದರ ಜೊತೆಗೆ, ಈ ಹಿಂದೆ ನೋಡಿರದ, ಪರಿಚಯವಿಲ್ಲದ ಊರುಗಳಿಗೆ ಪ್ರವಾಸ ಕೈಗೊಂಡು ಅಲ್ಲಿಯ ನೆಲ, ಜಲ, ಜನ, ಪರಿಸ್ಥಿತಿ ಪ್ರತಿಯೊಂದನ್ನೂ ಹತ್ತಿರದಿಂದ ನೋಡಲು ನೆರವಾಗುತ್ತದೆ.

ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಕಾರ್ಯ ನಿರ್ವಹಿಸುವ ವಸತಿ ಶಾಲೆ ಹಾಗೂ ವಸತಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳನ್ನು ಶೈಕ್ಷಣಿಕ ಪ್ರವಾಸ ಕೈಗೊಳ್ಳಲು ತಮ್ಮ ವ್ಯಾಪಿಯ ಶಾಲೆಗಳಿಗೆ ಅನುಮತಿ ನೀಡುವಂತೆ ಕೆಲವು ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರಿಂದ ಪತ್ರಗಳನ್ನು ಸ್ವೀಕರಿಸಲಾಗಿರುತ್ತದೆ.

ಆದ್ದರಿಂದ ಮಕ್ಕಳಿಗೆ ನಿತ್ಯದ ಶಾಲಾ ವಾತಾವರಣದಿಂದ ಹೊರ ಕರೆತಂದು, ಅವರಿಗೆ ಒಂದು ಆಕರ್ಷಣೆಯ ರೀತಿಯಲ್ಲಿ ಪಠ್ಯಕ್ಕೆ ಸಂಬಂಧಿಸಿದಂತೆ ಹಾಗೂ ಇನ್ನಿತರ ಹೆಚ್ಚಿನ ವಿಷಯಗಳ ಬಗ್ಗೆ ಮನವರಿಕೆ ಮಾಡಿಕೊಡುವುದು ಶೈಕ್ಷಣಿಕ ಪ್ರವಾಸದ ಮುಖ್ಯ ಉದ್ದೇಶವಾಗಿರುತ್ತದೆ. ಶೈಕ್ಷಣಿಕ ಪ್ರವಾಸಕ್ಕೆ ತೆರಳುವ ಮುನ್ನ ಕರ್ನಾಟಕ ರಾಜ್ಯದಲ್ಲಿರುವ ಯಾವ ಬಗೆಯ ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳುವುದು, ಎಷ್ಟು ದೂರದ ಪ್ರವಾಸ, ಎಷ್ಟು ದಿನಗಳ ಪ್ರವಾಸ ಮಾಡಬೇಕು ಎಂಬುದನ್ನು ಕೆಳಕಂಡಂತೆ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಆಧ್ಯಕ್ಷತೆಯಲ್ಲಿ ಸಮಿತಿಯನ್ನು ಜಿಲ್ಲಾ ಮಟ್ಟದಲ್ಲಿ ರಚಿಸಿ ಅನುಮೋದನೆ ಪಡೆಯತಕ್ಕದ್ದು.